ವಿಧಾನ ಸಭಾ ಕ್ಷೇತ್ರದಲ್ಲಿನ ಶಾಸಕರ ಅಭಿಪ್ರಾಯವನ್ನು ಪಡೆದು ಆ ಕ್ಷೇತ್ರದಲ್ಲಿನ ಅರ್ಹರಿಗೆ ಈ ಪರವಾನಗಿಯನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (440)269
ಮಾನ್ಯ ಸದಸ್ಯರ ಹೆಸರು : ಶ್ರೀ. ಶ್ರೀನಿವಾಸ್.ಎಂ (ಮಂಡ್ಯ)
ಉತ್ತರಿಸುವ ಸಚಿವರು : (ಶ್ರೀ.ಸಿ.ಎಂ.ಉದಾಸಿ)
: ಮಾನ್ಯ ಲೋಕೋಪಯೋಗಿ ಸಚಿವರು

ಅ) ಮೈಸೂರು-ಬೆಂಗಳೂರು ರಾಜ್ಯ ಹೆದ್ದಾರಿ ಮಂಡ್ಯ ನಗರದ ಬೈಪಾಸ್ ಮುಖಾಂತರ ಹಾದುಹೋಗುವ ಪ್ರಸ್ತಾವನೆ ಕುರಿತು ಸರ್ಕಾರ ಕೈಗೊಂಡ ತೀರ್ಮಾನಗಳೇನು;

ಮೈಸೂರು-ಬೆಂಗಳೂರು ರಾಜ್ಯ ಹೆದ್ದಾರಿಯಲ್ಲಿ ಮಂಡ್ಯ ನಗರಕ್ಕೆ 11.60 ಕಿಮೀ. ಉದ್ದದ ಬೈಪಾಸ್ ರಸ್ತೆ ನಿರ್ಮಾಣವನ್ನು 102 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ತೆಗೆದುಕೊಳ್ಳಲು ಯೋಜಿಸಲಾಗಿದ್ದು, ಇದಕ್ಕಾಗಿ ಯೋಜನಾ ವರದಿಯನ್ನು ತಯಾರಿಸಲಾಗಿದೆ.

ಆ) ಹಾಗಿದ್ದಲ್ಲಿ, ಸರ್ವೆ ಕಾರ್ಯಗಳು ಮುಗಿದಿದ್ದರೂ ಅದು ಕಾರ್ಯ ರೂಪಕ್ಕೆ ಬಾರದಿರಲು ಕಾರಣಗಳೇನು;

ಈ ಕಾಮಗಾರಿಯ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಈ ವಿಚಾರದಲ್ಲಿ ಸರ್ಕಾರದ ನಿಲುವುಗಳೇನು?

ಈ ಕಾಮಗಾರಿಯನ್ನು ಅನುದಾನದ ಲಭ್ಯತೆ ಮೇರೆಗೆ ಕೈಗೊಳ್ಳಲು ಪರಿಶೀಲಿಸಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (441)270
ಸದಸ್ಯರ ಹೆಸರು : ಶ್ರೀ.ಶ್ರೀನಿವಾಸ್ ಎಂ. (ಮಂಡ್ಯ)
ಉತ್ತರಿಸುವ ಸಚಿವರು : (ಶ್ರೀ.ಎಸ್.ಸುರೇಶ್‌ಕುಮಾರ್)
: ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಅ. ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳಿಗಾಗಿ ಪೂರಕ ಅಂದಾಜುಗಳ ಎಸ್‌ಎಫ್‌ಸಿ ಅನುದಾನ ಬಿಡುಗಡೆ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ?

ಹೌದು

ಆ. ಹಾಗಿದ್ದಲ್ಲಿ, ಹಣ ಬಿಡುಗಡೆಗೆ ವಿಳಂಬವಾಗಲು ಕಾರಣಗಳೇನು?

ದಿನಾಂಕ:05–06–2007ರ ಸರ್ಕಾರದ ಆದೇಶ ಸಂಖ್ಯೆ:ನಅಇ 23 ಎಸ್‌ಎಫ್‌ಸಿ 2007ರಲ್ಲಿ ಮಂಡ್ಯ ನಗರಸಭೆಯು ಸೇರಿದಂತೆ ವಿವಿಧ ಜಿಲ್ಲೆಗಳ ನಗರ ಸ್ಥಳೀಯ ಸಂಸ್ಥೆಗಳಿಗೆ ನಿಗದಿತ ಅನುದಾನವನ್ನು ಸೀಮಿತಗೊಳಿಸಿ ಬಿಡುಗಡೆ ಮಾಡಲಾಗಿರುತ್ತದೆ.

ಇ. ಮಂಡ್ಯ ನಗರಸಭಾ ವ್ಯಾಪ್ತಿಯಲ್ಲಿ ಸ್ಥಗಿತಗೊಂಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅನುಕೂಲವಾಗುವಂತೆ ಸಕಾಲದಲ್ಲಿ ಹಣ ಬಿಡುಗಡೆ ಮಾಡಲು ಸರ್ಕಾರದ ತುರ್ತು ಕ್ರಮಗಳೇನು?

ಎಸ್‌ಎಫ್‌ಸಿ ಮುಕ್ತನಿಧಿಯಿಂದ ಮಂಡ್ಯ ನಗರಸಭೆಗೆ ಪ್ರತಿ ವರ್ಷ ಬಿಡುಗಡೆಯಾಗುವ ಅನುದಾನವನ್ನು ಉಪಯೋಗಿಸಿಕೊಂಡು ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಬಹುದಾಗಿದೆ.

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (443)271
2. ಸದಸ್ಯರ ಹೆಸರು : ಶ್ರೀ.ಶ್ರೀನಿವಾಸ್.ಎಂ.(ಮಂಡ್ಯ)
3. ಉತ್ತರಿಸುವವರು : (ಶ್ರೀ.ಬಿ.ಎಸ್.ಯಡಿಯೂರಪ್ಪ)
: ಮಾನ್ಯ ನಗರಾಭಿವೃದ್ಧಿ ಸಚಿವರು

1. ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರವು ಇಲ್ಲಿಯವರೆವಿಗೆ ನಿರ್ಮಿಸಿರುವ ಬಡಾವಣೆಗಳೆಷ್ಟು ಮತ್ತು ಎಷ್ಟು ಫಲಾನುಭವಿಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡಿದೆ;

ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರವು ಇಲ್ಲಿಯವರೆಗೆ ಮೂರು ಬಡಾವಣೆಗಳನ್ನು ರಚನೆ ಮಾಡಿದೆ ಇದರಲ್ಲಿ ವಿವಿಧ ಅಳತೆಯ **2837** ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ.

2. ನಿವೇಶನಗಳನ್ನು ಬಯಸಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು;

ಬೇಡಿಕೆ ಸಮೀಕ್ಷೆ ಮಾಡಲಾಗಿ ನಿವೇಶನ ಬಯಸಿ ಅರ್ಜಿ ಸಲ್ಲಿಸಿದವರ ಒಟ್ಟು ಸಂಖ್ಯೆ **33,065**.

3. ನಿವೇಶನಗಳ ಹಂಚಿಕೆಗಾಗಿ ಹೊಸ ಬಡಾವಣೆಗಳನ್ನು ರಚಿಸುವ ಪ್ರಸ್ತಾವನೆ ಮತ್ತು ಕ್ರಿಯಾ ಯೋಜನೆಗಳೇನು;

ಹೊಸ ಬಡಾವಣೆ ರಚಿಸಲು ಕ್ಯಾತುಂಗೆರೆ ಪ್ರದೇಶದಲ್ಲಿ **74** ಎಕರೆ **07** ಗುಂಟೆ ಹಾಗೂ ಹಾಲಹಳ್ಳಿ, ಗುತ್ತಲು ಗ್ರಾಮದ ಪ್ರದೇಶದಲ್ಲಿ **132** ಎಕರೆ **11** ಗುಂಟೆ ಒಟ್ಟು **206** ಎಕರೆ **18** ಗುಂಟೆ ಜಮೀನನ್ನು ಬಡಾವಣೆ ರಚಿಸುವ ಕುರಿತು ಗುರುತಿಸಲಾಗಿದ್ದು, ಈ ಬಗ್ಗೆ ಸಾರ್ವಜನಿಕರಿಂದ ತಕರಾರು ಬಂದಿದ್ದು ಯೋಜನೆ ವ್ಯಾಪ್ತಿಯಲ್ಲಿ ಬರುವ ಜಮೀನುಗಳಲ್ಲಿ ಬಂದಿರುವ ಅಭಿವೃದ್ಧಿ ಚಟುವಟಿಕೆಗಳ ಬಗ್ಗೆ